**2011ರ ಕರ್ನಾಟಕ ಅಧಿನಿಯಮ ಸಂಖ್ಯೆ: 2**

# ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011

## ಪ್ರಕರಣಗಳ ಪಟ್ಟಿ


**ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ:**

**ಪ್ರಕರಣಗಳು:**

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು
3. ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಅಥವಾ ಬಡ್ತಿ
4. ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯಾಧಿಕಾರಿಗಳು ಅಥವಾ ಇತರೆ ಸಿಬ್ಬಂದಿಗಳ ಕಡ್ಡಾಯ ನೇಮಕಾತಿ
5. ಸೂಕ್ತ ಹುದ್ದೆಗೆ ವಿಶೇಷಜ್ಞರು ಅಥವಾ ಹಿರಿಯ ವಿಶೇಷಜ್ಞರ ಕಡ್ಡಾಯ ನೇಮಕಾತಿ ಅಥವಾ ವರ್ಗಾವಣೆ ಅಥವಾ ಬಡ್ತಿ
6. ಸಾರ್ವಜನಿಕ ಹಿತದೃಷ್ಟಿಯಿಂದ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯ ವರ್ಗಾವಣೆ
7. ದಂಡಗಳು

7ಎ. ಅಪೀಲು

8. ಇತರ ಕಾನೂನುಗಳ ಮೇಲೆ ಅಧಿನಿಯಮದ ಅಧ್ಯಾರೋಹಿ ಪರಿಣಾಮ
9. ತೊಂದರೆಗಳನ್ನು ನಿವಾರಿಸಲು ಅಧಿಕಾರ
10. ಅನುಸೂಚಿಯನ್ನು ತಿದ್ದುಪಡಿ ಮಾಡಲು ಅಧಿಕಾರ
11. ಸದ್ಭಾವನೆಯಲ್ಲಿ ಕೈಗೊಂಡ ಕ್ರಮದ ರಕ್ಷಣೆ
12. ನಿಯಮಗಳ ರಚನಾಧಿಕಾರ
13. ತಾತ್ಕಾಲಿಕ ಉಪಬಂಧಗಳು

ಅನುಸೂಚಿ – I

ಅನುಸೂಚಿ - II


## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**I**

**2011ರ ಅಧಿನಿಯಮ ಸಂಖ್ಯೆ 2.-** ಈ ಮುಂದಿನ ಉದ್ದೇಶಗಳನ್ನು ಎಂದರೆ,–

(ಎ) ಕೌನ್ಸಿಲಿಂಗ್‌ನ ಪ್ರಕ್ರಿಯೆಯ ಮೂಲಕ ವರ್ಗಾವಣೆಯಲ್ಲಿ ಪಾರದರ್ಶಕತೆ ತರುವುದು;

(ಬಿ) ವೈದ್ಯಾಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಯ ಸಂಬಂಧದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕನಿಷ್ಠ ಸೇವಾ ವರ್ಷಗಳನ್ನು ಖಚಿತಪಡಿಸುವುದು;

(ಸಿ) ವಿಶೇಷಜ್ಞರ ಅಥವಾ ಹಿರಿಯ ವಿಶೇಷಜ್ಞರ ಕೆಲಸವನ್ನು ಅವರ ವಿದ್ಯಾರ್ಹತೆಗೆ ಅನುಗುಣವಾಗಿರುವುದನ್ನು ನಿಶ್ಚಿತಗೊಳಿಸುವುದು,

– ಇವುಗಳನ್ನು ಸಾಧಿಸುವ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಯ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವುದಕ್ಕಾಗಿ ಹಾಗೆಯೇ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಆಯುಷ್ ಇಲಾಖೆಯಲ್ಲಿಯ ವೈದ್ಯಾಧಿಕಾರಿಗಳು ಹಾಗೂ ಇತರ ಸಿಬ್ಬಂದಿಯ ವರ್ಗಾವಣೆಯನ್ನು ನಿಯಂತ್ರಿಸುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2011ರ ವಿಧಾನ ಪರಿಷತ್ತಿನ ವಿಧೇಯಕ ಸಂಖ್ಯೆ:01, ಕಡತ ಸಂಖ್ಯೆ:ಸಂವ್ಯಶಾಇ 3 ಶಾಸನ 2011)

(ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 41ನೇ ನಮೂದನೆಯಡಿಯಲ್ಲಿ ಬರುತ್ತದೆ.)

## II

**2017ರ ಅಧಿನಿಯಮ ಸಂಖ್ಯೆ 34.**–ಒಂದೇ ಸ್ಥಳದಲ್ಲಿ ಹತ್ತು ವರ್ಷಗಳನ್ನು ಪೂರೈಸಿದ ಹೆಚ್ಚಿನ ಸಂಖ್ಯೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದಾರೆ. ಸಾರ್ವಜನಿಕ ಹಿತಾಸಕ್ತಿಯಲ್ಲಿ ಅವರನ್ನು ವರ್ಗಾವಣೆ ಮಾಡುವುದಕ್ಕಾಗಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011ರ 6ನೇ ಪ್ರಕರಣವನ್ನು ತಿದ್ದುಪಡಿ ಮಾಡುವ ಮೂಲಕ ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆಯನ್ನು ಶೇಕಡಾ ಐದರಿಂದ ಶೇಕಡಾ ಹದಿನೈದಕ್ಕೆ ಏರಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದುದರಿಂದ ಈ ವಿಧೇಯಕ.

[2017ರ ವಿಧಾನಸಭೆಯ ವಿಧೇಯಕ ಸಂಖ್ಯೆ:23 ಕಡತ ಸಂಖ್ಯೆ:ಸಂವ್ಯಶಾಇ 30 ಶಾಸನ 2017]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 41ನೆಯ ನಮೂದನೆಯಡಿಯಲ್ಲಿ ಬರುತ್ತದೆ.]

## III

**2025ರ ಅಧಿನಿಯಮ ಸಂಖ್ಯೆ: 70** ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011ನ್ನು ಈ ಮುಂದಿನವುಗಳಿಗಾಗಿ ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ,-

(ಎ) ಆಡಳಿತಾತ್ಮಕ ಹುದ್ದೆಗಳು, ಸಕ್ಷಮ ಪ್ರಾಧಿಕಾರಿ, ಮಹತ್ವದ ಖಾಲಿಹುದ್ದೆ, ಗ್ರೇಟರ್ ಬೆಂಗಳೂರು ಪ್ರದೇಶ, ವ್ಯಕ್ತಿಗಳ ವಿಶೇಷ ಪ್ರವರ್ಗ ಮುಂತಾದ ಪದಗಳ ಪರಿಭಾಷೆಗಳ

ಹುದ್ದೆಗಳಿಗೆ ನಿಯುಕ್ತಿಗೊಳಿಸಲು ಸರ್ಕಾರವು ನಿಯಮಗಳನ್ನು ರಚಿಸಲು ಸಾಧ್ಯವಾಗಿಸುವುದು;

(ಬಿ) ಪ್ರಾಜೆಕ್ಟ್ ಹುದ್ದೆಗಳು ಮತ್ತು ಆಡಳಿತಾತ್ಮಕ ಹುದ್ದೆಗಳಿಗೆ ನಿಯುಕ್ತಿಗೊಳಿಸುವ ವಿಧಾನದ ಕುರಿತು ನಿಯಮಗಳನ್ನು ರಚಿಸುವುದು;

(ಸಿ) ಅಧಿನಿಯಮದಲ್ಲಿನ ಕೆಲವು ವ್ಯಯದ ಮತ್ತು ಅನಗತ್ಯ ಉಪಬಂಧಗಳನ್ನು ಬಿಟ್ಟುಬಿಡುವುದು;

(ಡಿ) ಈ ಅಧಿನಿಯಮದಡಿ ಸಕ್ಷಮ ಪ್ರಾಧಿಕಾರವು ಮಾಡಿದ ವರ್ಗಾವಣೆಯಿಂದ ಬಾಧಿತರಾದ ವ್ಯಕ್ತಿಗಳು ನಿರ್ದಿಷ್ಟಪಡಿಸಲಾದ ಪ್ರಾಧಿಕಾರಕ್ಕೆ ಅಪೀಲು ಹೋಗುವುದು; ಮತ್ತು

(ಇ) ಇತರೆ ಆನುಷಂಗಿಕ ತಿದ್ದುಪಡಿಗಳನ್ನು ಸಹ ಮಾಡುವುದು,

ವಿಷಯವು ತುರ್ತು ಸ್ವರೂಪದ್ದಾಗಿರುವುದರಿಂದ ಮತ್ತು ರಾಜ್ಯ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿಲ್ಲದಿರುವುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧ್ಯಾದೇಶ, 2025 (2025ರ ಕರ್ನಾಟಕ ಅಧ್ಯಾದೇಶ 05)ನ್ನು ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಸದರಿ ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

ಆದ್ದರಿಂದ ಈ ವಿಧೇಯಕ.

[2025ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 28, ಕಡತ ಸಂಖ್ಯೆ:ಸಂವ್ಯಶಾಇ 34 ಶಾಸನ 2025]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 41ನೇ ಮತ್ತು 3ನೇ ಪಟ್ಟಿಯ 26ನೇ ನಮೂದನೆಯಡಿ ಬರುತ್ತದೆ.]
[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:581, ದಿನಾಂಕ:12.09.2025ರಲ್ಲಿ ಪ್ರಕಟಗೊಂಡಿದೆ]

– – –

**2011ರ ಕರ್ನಾಟಕ ಅಧಿನಿಯಮ ಸಂಖ್ಯೆ: 2**

(2011ರ ಫೆಬ್ರವರಿ ಮೂರನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

# ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011

(2011ರ ಫೆಬ್ರವರಿ ಒಂದನೇ ದಿನಾಂಕದಂದು ರಾಜ್ಯಪಾಲರ ಅನುಮೋದನೆಯನ್ನು ಪಡೆಯಲಾಗಿದೆ)

(2017 ಅಧಿನಿಯಮ ಸಂಖ್ಯೆ 34 ಮತ್ತು 2025ರ 70ರಲ್ಲಿ ತಿದ್ದುಪಡಿಯಾದಂತೆ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆಯನ್ನು ನಿಯಂತ್ರಿಸಿ, ಗ್ರಾಮೀಣ ಪ್ರದೇಶಗಳಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯು ಲಭ್ಯವಾಗುವಂತೆ ಮಾಡುವುದಕ್ಕಾಗಿ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.

ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆಯನ್ನು ನಿಯಂತ್ರಿಸಿ, ಗ್ರಾಮೀಣ ಪ್ರದೇಶಗಳಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯು ಲಭ್ಯವಾಗುವಂತೆ ಮಾಡುವುದಕ್ಕಾಗಿ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅವುಗಳಿಗೆ ಪ್ರಾಸಂಗಿಕವಾದ ವಿಷಯಗಳಿಗಾಗಿ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಅರವತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು **ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ,** 2011 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**(ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ: ಆಕುಕ 123 ಹೆಚ್‌ಎಸ್‌ಎಚ್ 2011, ದಿನಾಂಕ: 12.05.2011ರ ಮೂಲಕ ದಿನಾಂಕ: 12.05.2011 ರಿಂದ ಜಾರಿಗೆ ಬಂದಿದೆ)**

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

[1][(ಎ) "ಆಡಳಿತಾತ್ಮಕ ಹುದ್ದೆಗಳು" ಎಂದರೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ, ಜಿಲ್ಲಾ ಶಸ್ತ್ರ ಚಿಕಿತ್ಸಕ, ತರಬೇತಿ ಸಂಸ್ಥೆಗಳ ಪ್ರಾಂಶುಪಾಲ, ಜಂಟಿ ನಿರ್ದೇಶಕ, ಉಪ ನಿರ್ದೇಶಕ, ಜಿಲ್ಲಾ ಮಟ್ಟದ ಕಾರ್ಯಕ್ರಮ ಅಧಿಕಾರಿ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ದೊಡ್ಡ ಆಸ್ಪತ್ರೆಗಳ ಅಧೀಕ್ಷಕ ಹಾಗೂ ಆಯುಷ್ ಉಪ ನಿರ್ದೇಶಕ ಮತ್ತು ಜಿಲ್ಲಾ ಆಯುಷ್ ಆರೋಗ್ಯಾಧಿಕಾರಿ ಎಂಬುದಾಗಿ ಗುರುತಿಸಲಾದ ಹುದ್ದೆಗಳು;][1]

1. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

[1][(ಎಎ)][1] "ನೇಮಕ" ಎಂದರೆ, ನೇರ ನೇಮಕಾತಿ ಮೂಲಕ ಅಥವಾ ವಿಲೀನಗೊಳಿಸುವ ಮೂಲಕ ಅಥವಾ ಬಡ್ತಿಯ ಮೂಲಕ ಅಥವಾ ವೃಂದ ಬದಲಾವಣೆಯ ಮೂಲಕ ಮಾಡಿದ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯ ನೇಮಕ;

1. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಮರುಸಂಖ್ಯೆ ನೀಡಲಾಗಿದೆ.

(ಬಿ) "ನೇಮಕಾತಿ ಪ್ರಾಧಿಕಾರ" ಎಂದರೆ, ಸಂಬಂಧಿಸಿದ ವೃಂದಗಳಿಗೆ ನೇಮಕ ಮಾಡಲು ಸಕ್ಷಮವಾದ ಪ್ರಾಧಿಕಾರ;

(ಸಿ) [1][ಸಕ್ಷಮ ಪ್ರಾಧಿಕಾರಿ" ಎಂದರೆ ಆರೋಗ್ಯ ಅಧಿಕಾರಿಗಳು ಅಥವಾ ಇತರ ಸಿಬ್ಬಂದಿಗಳ ವರ್ಗಾವಣೆಯ ಆದೇಶಗಳನ್ನು ಮಾಡಲು ಸಕ್ಷಮವೆಂದು ನಿಯಮಿಸಬಹುದಾದ ಅಂಥ ಪ್ರಾಧಿಕಾರಿ][1]

[2][(ಸಿಸಿ) "ಮಹತ್ವದ ಖಾಲಿಹುದ್ದೆ" ಎಂದರೆ ನಿಯಮಿಸಬಹುದಾದ ಅಂಥ ಹುದ್ದೆಗಳ ಖಾಲಿ ಸ್ಥಾನಗಳು;][2]

1. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.

2. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

(ಡಿ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಇ) "ಸರ್ಕಾರಿ ಆಸ್ಪತ್ರೆ" ಎಂದರೆ ಜಿಲ್ಲಾ ಆಸ್ಪತ್ರೆಗಳು, ಇತರ ದೊಡ್ಡ ಆಸ್ಪತ್ರೆಗಳು, ನಗರ ಕುಟುಂಬ ಕಲ್ಯಾಣ ಕೇಂದ್ರ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ, ತಾಲ್ಲೂಕು ಮಟ್ಟದಲ್ಲಿಯ ಸಾರ್ವಜನಿಕ ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಉಪ ಕೇಂದ್ರ, ಸಂಚಾರಿ ಆರೋಗ್ಯ ಘಟಕ, ಸಂಚಾರಿ ಟ್ರೈಬಲ್ ಘಟಕ, ಹೆರಿಗೆ ಕೇಂದ್ರ ಮತ್ತು ಆಯುಷ್ ಆಸ್ಪತ್ರೆ ಅಥವಾ ಸರ್ಕಾರದಿಂದ ಸ್ಥಾಪಿಸಲ್ಪಟ್ಟಿರುವ ಯಾವುದೇ ಹೆಸರಿನಿಂದ ಕರೆಯಲ್ಪಡುವ ಮತ್ತು ಯಾವುದೇ ವೈದ್ಯಕೀಯ ಪದ್ಧತಿಗೆ ಸಂಬಂಧಿಸಿದ ಯಾವುದೇ ಸಂಸ್ಥೆ, ಕೇಂದ್ರ ಅಥವಾ ಇತರ ಕೇಂದ್ರ ಇವುಗಳನ್ನು ಒಳಗೊಳ್ಳುತ್ತದೆ;

(ಎಫ್) "ಸರ್ಕಾರಿ ಸಂಸ್ಥೆ" ಎಂದರೆ ಮತ್ತು ಇದು ಒಂದು ತರಬೇತಿ ಕೇಂದ್ರ, ಒಂದು ಆಡಳಿತ ಕಚೇರಿ ಅಥವಾ ಯಾವುದೇ ವೈದ್ಯಕೀಯ ಪದ್ಧತಿಗೆ ಸಂಬಂಧಿಸಿದ, ರಾಜ್ಯ ಸರ್ಕಾರವು ಸ್ಥಾಪಿಸಿದ, ಮತ್ತು ಯಾವುದೇ ಹೆಸರಿನಿಂದ ಕರೆಯಲ್ಪಡುವ ಯಾವುದೇ ಇತರ ಸಂಸ್ಥೆಗಳು ಇವುಗಳನ್ನು ಒಳಗೊಳ್ಳುತ್ತದೆ;

[1][(ಎಫ್‌ಎಫ್) "ಗ್ರೇಟರ್ ಬೆಂಗಳೂರು ಪ್ರದೇಶ" ಎಂದರೆ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ 36)ರಡಿ ರಚಿಸಲಾದ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪರಿಮಿತಿಗಳಲ್ಲಿ ಬರುವ ಪ್ರದೇಶಗಳು;][1]

1. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

(ಜಿ) "ವೈದ್ಯಾಧಿಕಾರಿ" ಎಂದರೆ, ಅನುಸೂಚಿ – I ರಲ್ಲಿ ನಿರ್ದಿಷ್ಟಪಡಿಸಿದ ಹುದ್ದೆಗಳ ಯಾವುದೇ ಪ್ರವರ್ಗಕ್ಕೆ ನೇಮಕಾತಿ ಪ್ರಾಧಿಕಾರವು ನೇಮಕ ಮಾಡಿದ ಒಬ್ಬ ವೈದ್ಯಾಧಿಕಾರಿ;

(ಎಚ್) "ಇತರ ಸಿಬ್ಬಂದಿ" ಎಂದರೆ, ಅನುಸೂಚಿ – II ರಲ್ಲಿ ನಿರ್ದಿಷ್ಟಪಡಿಸಿದ ಹುದ್ದೆಗಳ ಯಾವುದೇ ಪ್ರವರ್ಗಕ್ಕೆ ನೇಮಕಾತಿ ಪ್ರಾಧಿಕಾರವು ನೇಮಕ ಮಾಡಿದ ಒಬ್ಬ ವ್ಯಕ್ತಿ;

(ಐ) "ಕೌನ್ಸಿಲಿಂಗ್ ಪ್ರಕ್ರಿಯೆ" ಎಂದರೆ, ನೇಮಕಾತಿಗಾಗಿ ಅಥವಾ ವರ್ಗಾವಣೆಗಾಗಿ ಪರಿಗಣಿಸಿರುವ ವ್ಯಕ್ತಿಗೆ ಆತನು ಕೆಲಸ ಮಾಡಿದ ಸ್ಥಳ ಅಥವಾ ವಲಯದಲ್ಲಿ ಆತನು ಸಲ್ಲಿಸಿದ ಸೇವೆಯ ಅವಧಿಯ ಆಧಾರದ ಆದ್ಯತೆಯ ಮೇಲೆ ಮತ್ತು ನಿಯಮಿಸಬಹುದಾದ ಅಂಥ ಇತರ ಅರ್ಹತೆಯ ಮೇಲೆ, ಸ್ಥಳ ಅಥವಾ ಹುದ್ದೆಯನ್ನು ಆಯ್ಕೆ ಮಾಡಲು ಒಬ್ಬ ವ್ಯಕ್ತಿಗೆ ಅವಕಾಶವನ್ನು ನೀಡುವ ಪ್ರಕ್ರಿಯೆ;

(ಜೆ) "ಪ್ರಾಜೆಕ್ಟ್ ಹುದ್ದೆ" ಎಂದರೆ, ವಿದೇಶಿ ಏಜೆನ್ಸಿಯಾಗಲೀ ಅಥವಾ ಭಾರತ ಸರ್ಕಾರವಾಗಲೀ ನೀಡಿದ ನೆರವಿನ ಅಡಿಯಲ್ಲಿ ನಿರ್ದಿಷ್ಟ ಉದ್ದೇಶ ಮತ್ತು [1][ಅಧಿಸೂಚನೆಯ ಮೂಲಕ ಸರ್ಕಾರವು ಹಾಗೆಂದು ಗುರುತಿಸಲಾದ][1] ಒಂದು ಹುದ್ದೆ;

1. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

(ಕೆ) "ಗ್ರಾಮೀಣ ಪ್ರದೇಶ" ಎಂದರೆ, ನಗರ ಪ್ರದೇಶ ಆಗಿರದ ಒಂದು ಪ್ರದೇಶ;

(ಎಲ್) "ಅನುಸೂಚಿ" ಎಂದರೆ, ಈ ಅಧಿನಿಯಮಕ್ಕೆ ಲಗತ್ತಿಸಲಾದ ಅನುಸೂಚಿ;

(ಎಂ) "ಹಿರಿಯ ವಿಶೇಷಜ್ಞ" ಎಂದರೆ, ಸ್ನಾತಕೋತ್ತರ ಪದವಿ ಅಥವಾ ಸ್ನಾತಕೋತ್ತರ ಡಿಪ್ಲೊಮೊ ವಿದ್ಯಾರ್ಹತೆಯನ್ನು ಹೊಂದಿರುವ ಮತ್ತು ಹಿರಿಯ [1][ಹಿರಿಯ ವಿಶೇಷಜ್ಞ ವೃಂದದಲ್ಲಿ ಕಾರ್ಯ ನಿರ್ವಹಿಸುತ್ತಿರುವ][1] ಒಬ್ಬ ವೈದ್ಯಾಧಿಕಾರಿ;

(ಎನ್) "ವಿಶೇಷಜ್ಞ" ಎಂದರೆ, ಸ್ನಾತಕೋತ್ತರ ಪದವಿ ಅಥವಾ ಸ್ನಾತಕೋತ್ತರ ಡಿಪ್ಲೊಮೊ ವಿದ್ಯಾರ್ಹತೆಯನ್ನು ಹೊಂದಿರುವ ಮತ್ತು [1][ವಿಶೇಷಜ್ಞ ವೃಂದದಲ್ಲಿ ಕಾರ್ಯ ನಿರ್ವಹಿಸುತ್ತಿರುವ][1] ಒಬ್ಬ ವೈದ್ಯಾಧಿಕಾರಿ;

[2][(ಎನ್ಎನ್) "ವ್ಯಕ್ತಿಗಳ ವಿಶೇಷ ಪ್ರವರ್ಗ" ಎಂದರೆ ನಿಯಮಿಸಬಹುದಾದ ಅಂಥ ವಿಶೇಷ ಪ್ರವರ್ಗಗಳಿಗೆ ಸೇರಿದ ವ್ಯಕ್ತಿಗಳು."; ಮತ್ತು][2]

1. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
2. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ

(ಒ) "ವರ್ಗಾವಣೆ" ಎಂದರೆ, ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯನ್ನು ಕೆಲಸದ ಒಂದು ಸ್ಥಳದಿಂದ ಇನ್ನೊಂದು ಕೆಲಸದ ಸ್ಥಳಕ್ಕೆ ನಿಯೋಜಿಸುವುದು;

(ಪಿ) "ನಗರ ಪ್ರದೇಶ" ಎಂದರೆ, ನಗರಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ಅಥವಾ ಕರ್ನಾಟಕ ಪೌರನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಇತರ ಅಧಿಸೂಚಿತ ಪ್ರದೇಶಗಳ ಮಿತಿಗಳೊಳಗೆ ಇರುವ ಯಾವುದೇ ಪ್ರದೇಶ ಮತ್ತು ಸರ್ಕಾರವು ಕಾಲಕಾಲಕ್ಕೆ ಅಧಿಸೂಚಿಸಬಹುದಾದ ಮೇಲೆ ಅಧಿಸೂಚಿಸಿದ ಪ್ರದೇಶಗಳ ಪರಿಮಿತಿಗಳಿಂದ ಅಂಥ ದೂರದವರೆಗೆ ಇರುವ ಪ್ರದೇಶ;

(ಕ್ಯೂ) "ವಲಯ – ಎ" ಎಂದರೆ, [1][ಗ್ರೇಟರ್ ಬೆಂಗಳೂರು ಪ್ರದೇಶವನ್ನು ಹೊರತುಪಡಿಸಿ][1] ಜಿಲ್ಲಾ ಕೇಂದ್ರಗಳಲ್ಲಿರುವ ನಗರಸಭೆ ಅಥವಾ ಪುರಸಭೆಯ ಪರಿಮಿತಿಯೊಳಗೆ ಬರುವ ಪ್ರದೇಶ;

1. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ

(ಆರ್) "ವಲಯ – ಬಿ" ಎಂದರೆ, ಜಿಲ್ಲಾ ಕೇಂದ್ರಗಳಲ್ಲಿರುವ ನಗರಸಭೆಯನ್ನು ಹೊರತುಪಡಿಸಿ ಇತರ ನಗರಸಭೆ, ಪಟ್ಟಣ ಪುರಸಭೆಗಳ ಅಥವಾ ಪಟ್ಟಣ ಪಂಚಾಯತಿಯ ಪರಿಮಿತಿಯೊಳಗೆ ಬರುವ ನಗರ ಪ್ರದೇಶ ಮತ್ತು ನಗರ ಪ್ರದೇಶಗಳೆಂದು ಅಧಿಸೂಚಿಸಿದ ಪ್ರದೇಶಗಳು;

[2][**3. ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಅಥವಾ ಬಡ್ತಿ.-** ಈ ಅಧಿನಿಯಮದಡಿಯಲ್ಲಿ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯ ಆರಂಭಿಕ ನೇಮಕಾತಿ, ವರ್ಗಾವಣೆ ಅಥವಾ ಮುಂಬಡ್ತಿಯನ್ನು ನಿಯಮಿಸಬಹುದಾದಂಥ ವಿಧಾನದಲ್ಲಿ ನಡೆಸುವ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಮಾಡತಕ್ಕದ್ದು:

ಪರಂತು ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ವರ್ಗಾವಣೆಗಳಿಗೆ ಸಂಬಂಧಿಸಿದ ಉಪಬಂಧಗಳು, ಪ್ರಾಜೆಕ್ಟ್ ಹುದ್ದೆಗಳು ಮತ್ತು ಆಡಳಿತಾತ್ಮಕ ಹುದ್ದೆಗಳೆಂದು ಗುರುತಿಸಲಾದ ಹುದ್ದೆಗಳಿಗೆ ಅನ್ವಯಿಸತಕ್ಕದ್ದಲ್ಲ:

ಮತ್ತು ಪರಂತು ಪ್ರಾಜೆಕ್ಟ್ ಮತ್ತು ಆಡಳಿತಾತ್ಮಕ ಹುದ್ದೆಗಳ ಆಯ್ಕೆ ಮತ್ತು ಸ್ಥಳನಿಯುಕ್ತಿಯ ಮಾನದಂಡ ಮತ್ತು ವಿಧಾನವು ನಿಯಮಿಸಬಹುದಾದಂತಿರತಕ್ಕದ್ದು.][2]

1. 2017ರ ಅಧಿನಿಯಮ ಸಂಖ್ಯೆ 34ರ ಮೂಲಕ 11.07.2017 ರಿಂದ ಬಿಟ್ಟುಬಿಡಲಾಗಿದೆ.
2. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ

**4. ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯಾಧಿಕಾರಿಗಳು ಅಥವಾ ಇತರೆ ಸಿಬ್ಬಂದಿಗಳ ಕಡ್ಡಾಯ ನೇಮಕಾತಿ.–** (1) ನೇಮಕಾತಿ ಪ್ರಾಧಿಕಾರ ಅಥವಾ ಸಕ್ಷಮ ಪ್ರಾಧಿಕಾರವು, ಸರ್ಕಾರಿ ಆಸ್ಪತ್ರೆ ಅಥವಾ ಸರ್ಕಾರಿ ಸಂಸ್ಥೆಗೆ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯ ಪ್ರಾರಂಭಿಕ ನೇಮಕಾತಿ ಅಥವಾ ಬಡ್ತಿಯ ಸಂದರ್ಭದಲ್ಲಿ, ಗ್ರಾಮೀಣ ಪ್ರದೇಶಗಳಲ್ಲಿನ ಖಾಲಿ ಸ್ಥಾನಗಳು ಭರ್ತಿ ಮಾಡುವುದನ್ನು ಮೊದಲು ಖಚಿತಪಡಿಸಿಕೊಳ್ಳತಕ್ಕದ್ದು.

[1][(2) ಗ್ರಾಮೀಣ ಪ್ರದೇಶದಲ್ಲಿ ನಿಯಮಿಸಲಾದಷ್ಟು ವರ್ಷಗಳ ಸೇವೆಯನ್ನು ಸಲ್ಲಿಸದಿರುವ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯನ್ನು ಗ್ರಾಮೀಣ ಪ್ರದೇಶದಲ್ಲಿನ ಹುದ್ದೆಗೆ ವರ್ಗಾಯಿಸತಕ್ಕದ್ದು.][1]

ಪರಂತು, ಗ್ರಾಮೀಣ ಪ್ರದೇಶಕ್ಕೆ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯ ಕಡ್ಡಾಯ ವರ್ಗಾವಣೆಗೆ ಸಂಬಂಧಿಸಿದ ಉಪಬಂಧಗಳನ್ನು ಐವತ್ತು ವರ್ಷಗಳ ವಯಸ್ಸನ್ನು ಮೀರಿದ ವ್ಯಕ್ತಿಗಳಿಗೆ ಅನ್ವಯಿಸತಕ್ಕದ್ದಲ್ಲ.

(3) ಕಡ್ಡಾಯ ಗ್ರಾಮೀಣ ಸೇವೆಯನ್ನು ನಿಯಮಿಸಲಾದಂಥ ಹುದ್ದೆಯ ಸಂಬಂಧದಲ್ಲಿ ಪ್ರಾರಂಭಿಕ ನೇಮಕಾತಿ ಅಥವಾ ಬಡ್ತಿಗೆ ಯಾವುದೇ ಖಾಲಿ ಸ್ಥಾನವು ಲಭ್ಯವಾಗದಿದ್ದಲ್ಲಿ, ಗ್ರಾಮೀಣ ಸೇವೆಗೆ ನಿಯಮಿಸಲಾದಷ್ಟು ವರ್ಷಗಳನ್ನು ಪೂರ್ಣಗೊಳಿಸಿರುವಂಥ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯನ್ನು 'ಬಿ' ವಲಯದಲ್ಲಿನ ಮತ್ತೊಂದು ಸ್ಥಳಕ್ಕೆ ವರ್ಗಾವಣೆ ಮಾಡುವ ಮೂಲಕ ಹಾಗೂ ಬಿ ವಲಯದಲ್ಲಿ ಯಾವುದೇ ಖಾಲಿ ಸ್ಥಾನವು ಲಭ್ಯವಿಲ್ಲದಿದ್ದಲ್ಲಿ, ಬಿ ವಲಯದಲ್ಲಿ ದೀರ್ಘಕಾಲ ಸೇವೆ ಸಲ್ಲಿಸಿದಂಥ ವ್ಯಕ್ತಿಯನ್ನು ನಗರ ಪ್ರದೇಶದ ಎ ವಲಯಕ್ಕೆ ವರ್ಗಾವಣೆ ಮಾಡುವ ಮೂಲಕ ಖಾಲಿ ಸ್ಥಾನವನ್ನು ಸೃಜಿಸಬಹುದು.

1. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಪ್ರತ್ಯಾಯೋಜಿಸಲಾಗಿದೆ

**5. ಸೂಕ್ತ ಹುದ್ದೆಗೆ ವಿಶೇಷಜ್ಞರು ಅಥವಾ ಹಿರಿಯ ವಿಶೇಷಜ್ಞರ ಕಡ್ಡಾಯ ನೇಮಕಾತಿ ಅಥವಾ ವರ್ಗಾವಣೆ ಅಥವಾ ಬಡ್ತಿ.–** (1) ಸ್ನಾತಕೋತ್ತರ ಪದವಿ ಅಥವಾ ಡಿಪ್ಲೋಮಾ ಹೊಂದಿರುವ ವಿಶೇಷಜ್ಞ ಅಥವಾ ಹಿರಿಯ ವಿಶೇಷಜ್ಞರನ್ನು, ಸ್ನಾತಕೋತ್ತರ ಪದವಿ ಅಥವಾ ಸ್ನಾತಕೋತ್ತರ ಡಿಪ್ಲೋಮಾ ಹೊಂದಿರುವಂಥವನ ವಿಷಯಕ್ಕೆ ಅಥವಾ ತಜ್ಞತೆಗೆ ಸಂಬಂಧಿಸಿದ ಅಥವಾ ಅನುರೂಪವಾದ ವಿಶೇಷಜ್ಞರ ಹುದ್ದೆಯೆಂದು ಗುರುತಿಸದಿರುವಂಥ ಹುದ್ದೆಯಲ್ಲಿನ ಕಾರ್ಯಕ್ಕೆ ನಿಯೋಜಿಸತಕ್ಕದ್ದಲ್ಲ ಅಥವಾ ವರ್ಗಾವಣೆ ಮಾಡತಕ್ಕದ್ದಲ್ಲ.

[1][(2) ವಿಶೇಷಜ್ಞರು ಅಥವಾ ಹಿರಿಯ ವಿಶೇಷಜ್ಞರು ಹೊಂದಿರುವಂಥ ಸ್ನಾತಕೋತ್ತರ ಪದವಿ ಅಥವಾ ಸ್ನಾತಕೋತ್ತರ ಡಿಪ್ಲೋಮಾದ ತಜ್ಞತೆಗೆ, ಗುರುತಿಸದಿರುವ ಅಂಥ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಥ ವಿಶೇಷಜ್ಞರು ಅಥವಾ ಹಿರಿಯ ವಿಶೇಷಜ್ಞರನ್ನು ಅವರುಗಳು ಹೊಂದಿರುವ ವಿಶೇಷ ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಗುರುತಿಸಲಾದ ಹುದ್ದೆಗೆ ವರ್ಗಾವಣೆ ಮಾಡತಕ್ಕದ್ದು:

ಪರಂತು ವಿಶೇಷಜ್ಞರು ಮತ್ತು ಹಿರಿಯ ವಿಶೇಷಜ್ಞರನ್ನು ಪ್ರಾಜೆಕ್ಟ್ ಹುದ್ದೆಗಳು ಮತ್ತು ಆಡಳಿತಾತ್ಮಕ ಹುದ್ದೆಗಳಿಗೆ ನಿಯಮಿಸಬಹುದಾದಂಥ ವಿಧಾನದಲ್ಲಿ ಸ್ಥಳನಿಯುಕ್ತಿಗೊಳಿಸಬಹುದು.][1]

1. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಪ್ರತ್ಯಾಯೋಜಿಸಲಾಗಿದೆ

**[2][6. ಸಾರ್ವಜನಿಕ ಹಿತದೃಷ್ಟಿಯಿಂದ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯ ವರ್ಗಾವಣೆ.-** (1) ಸೇವೆಯಲ್ಲಿರುವ ಮತ್ತು ಗ್ರಾಮೀಣ ಪ್ರದೇಶ, ಎ, ಬಿ ವಲಯ, ಅಥವಾ ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿನ ಸರ್ಕಾರಿ ಆಸ್ಪತ್ರೆ ಅಥವಾ ಸರ್ಕಾರಿ ಸಂಸ್ಥೆಯಲ್ಲಿ, ನಿಯಮಿಸಲಾದ ಸಂಖ್ಯೆಯ ನಿರಂತರ ಸೇವೆಯ ವರ್ಷಗಳನ್ನು ಪೂರೈಸಿರುವ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯನ್ನು, ಆ ಪ್ರದೇಶ ಅಥವಾ ಹುದ್ದೆಯಲ್ಲಿ ದೀರ್ಘಾವಧಿಯ ಸೇವೆ ಅಥವಾ ಸೇವಾವಧಿಯಲ್ಲಿರುವ ವ್ಯಕ್ತಿಗಳಿಗೆ ಆದ್ಯತೆಯನ್ನು ನೀಡುವ ಮೂಲಕ ಮತ್ತು ನಿಯಮಿಸಬಹುದಾದ ಅಂಥ ಮಾನದಂಡಗಳು ಅಥವಾ ಮನ್ನಣೆಯನ್ನು (weightage) ಪರಿಗಣಿಸಿ, ಈ ಮುಂದಿನ ಕ್ರಮದಲ್ಲಿ, ಎಂದರೆ.-

(1) ಗ್ರಾಮೀಣ ಪ್ರದೇಶ;

(2) ನಗರ ಪ್ರದೇಶದಲ್ಲಿನ ವಲಯ-ಬಿ:

(3) ನಗರ ಪ್ರದೇಶದಲ್ಲಿನ ವಲಯ – ಎ; ಮತ್ತು

(4) ಗ್ರೇಟರ್ ಬೆಂಗಳೂರು ಪ್ರದೇಶ:

- ಇವುಗಳಲ್ಲಿ ಅದೇ ಪ್ರದೇಶದಲ್ಲಿನ ಮತ್ತೊಂದು ಸರ್ಕಾರಿ ಆಸ್ಪತ್ರೆ ಅಥವಾ ಸರ್ಕಾರಿ ಸಂಸ್ಥೆಗೆ ಅಥವಾ ಯಾವುದೇ ಇತರ ಪ್ರದೇಶ ಅಥವಾ ವಲಯಕ್ಕೆ ಕೌನ್ಸಿಲಿಂಗ್ ಪ್ರಕ್ರಿಯೆಯ ಮೂಲಕ ವರ್ಗಾಯಿಸಬಹುದು:

ಪರಂತು, ವರ್ಷಾವಧಿಯಲ್ಲಿ ಅಂಥ ವರ್ಗಾವಣೆಯ ಒಟ್ಟು ಸಂಖ್ಯೆಯು ಅದೇ ವೃಂದದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಖ್ಯಾಬಲದ "ಶೇಕಡಾ ಹದಿನೈದರಷ್ಟನ್ನು" ಮೀರತಕ್ಕದ್ದಲ್ಲ:

ಮತ್ತು ಪರಂತು ವಿಶೇಷ ಪ್ರವರ್ಗಗಳಿಗೆ ಸೇರಿದ ವ್ಯಕ್ತಿಗಳ ಸಂದರ್ಭದಲ್ಲಿ, ಸರ್ಕಾರವು ವರ್ಗಾವಣೆಗಾಗಿ ಪ್ರತ್ಯೇಕ ಷರತ್ತುಗಳು ಮತ್ತು ವಿನಾಯಿತಿಗಳನ್ನು ನಿಯಮಿಸಬಹುದು:

ಅಲ್ಲದೆ ಪರಂತು ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿ ಸೇವೆ ಸಲ್ಲಿಸುತ್ತಿರುವ ವ್ಯಕ್ತಿಗಳಿಗಾಗಿ, ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿನ ವಿವಿಧ ಹುದ್ದೆಗಳಲ್ಲಿ ವ್ಯಕ್ತಿಯು ಸಲ್ಲಿಸಿದ ಒಟ್ಟು ನಿರಂತರ

ಸೇವೆಯನ್ನು, ಪ್ರಸ್ತುತ ಹುದ್ದೆಯಲ್ಲಿ ವ್ಯಕ್ತಿಯು ಸಲ್ಲಿಸಿದ ಒಟ್ಟು ನಿರಂತರ ಸೇವೆಗಿಂತ ಮಿಗಿಲಾಗಿ ಸೇವಾಕಾಲದ ಅವಧಿಯನ್ನು ಅಳೆಯುವ ಉದ್ದೇಶಕ್ಕಾಗಿ ಲೆಕ್ಕಹಾಕತಕ್ಕದ್ದು:

ಅಲ್ಲದೆ ಪರಂತು (1)ನೇ ಉಪ-ಪ್ರಕರಣದ ಅಡಿಯಲ್ಲಿ ಗ್ರೇಟರ್ ಬೆಂಗಳೂರು ಪ್ರದೇಶದಿಂದ ಹೊರಗಡೆಗೆ ವರ್ಗಾಯಿಸಲು ಅರ್ಹರಿರುವ ವ್ಯಕ್ತಿಗಳಿಗೆ ಕೌನ್ಸಿಲಿಂಗ್ ನಡೆಯುವಾಗ, ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿನ ಖಾಲಿ ಹುದ್ದೆಗಳು ಲಭ್ಯವಾಗತಕ್ಕದ್ದಲ್ಲ.

(2) ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯನ್ನು ಅಮಾನತ್ತಿನಿಂದ ಪೂರ್ವಪದವಿಗೆ ತರುವುದರ (reinstatement) ಮೇರೆಗೆ ಅಥವಾ ಶಿಸ್ತು ವಿಚಾರಣೆ ಬಾಕಿಯಿರಿಸಿದ ಅಮಾನತ್ತಿನ ಜಾಗಕ್ಕೆ ಪ್ರತಿಯಾಗಿ ಪ್ರಸ್ತುತ ಹುದ್ದೆಯಿಂದ ಬದಲಾಯಿಸುವ ಮೇರೆಗೆ ಸಕ್ಷಮ ಪ್ರಾಧಿಕಾರವು ಕೌನ್ಸಿಲಿಂಗ್ ಮೂಲಕ ವರ್ಷಾವಧಿಯ ಯಾವುದೇ ಸಮಯದಲ್ಲಿ ಸ್ಥಳನಿಯುಕ್ತಿಗೊಳಿಸತಕ್ಕದ್ದು, ಆದರೆ ಆತನನ್ನು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ವಲಯಕ್ಕಿಂತ ಮೇಲಿನ ವಲಯಕ್ಕೆ ಸ್ಥಳನಿಯುಕ್ತಿಗೊಳಿಸತಕ್ಕದ್ದಲ್ಲ ಹಾಗೂ ಶಿಸ್ತು ಪ್ರಾಧಿಕಾರದ ಆದೇಶಗಳಲ್ಲಿ ನಿರ್ದಿಷ್ಟಪಡಿಸಿದ ಪ್ರದೇಶದೊಳಗೆ ಸ್ಥಳನಿಯುಕ್ತಿಯನ್ನು ನಿರ್ಬಂಧಿಸಬಹುದು.

(3) ಮಹತ್ವದ ಖಾಲಿಹುದ್ದೆಗಳನ್ನು ತುಂಬಲು ಸರ್ಕಾರವು ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯನ್ನು ವರ್ಷಾವಧಿಯ ಯಾವುದೇ ಸಮಯದಲ್ಲಿ ಕೌನ್ಸಿಲಿಂಗ್ ಇಲ್ಲದೆ ಸ್ಥಳನಿಯುಕ್ತಿಗೊಳಿಸಬಹುದು:

ಪರಂತು ಸ್ಥಳನಿಯುಕ್ತಿಗೊಳಿಸಬೇಕಾದ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯು ನಿರ್ದಿಷ್ಟಪಡಿಸಿದ ವಿಶೇಷ ಪ್ರವರ್ಗಗಳ ವಿನಾಯಿತಿಗೊಳಪಟ್ಟು (1)ನೇ ಉಪ-ಪ್ರಕರಣದ ಅನುಸಾರ ಸಿದ್ಧಪಡಿಸಿದ ದೀರ್ಘಾವಧಿ ಸೇವಾ ವ್ಯಕ್ತಿಗಳ ಪಟ್ಟಿಯಲ್ಲಿ ಅತ್ಯಂತ ಜೇಷ್ಠರಾಗಿರತಕ್ಕದ್ದು.][2]

1. 2017ರ ಅಧಿನಿಯಮ ಸಂಖ್ಯೆ 34ರ ಮೂಲಕ 11.07.2017 ರಿಂದ ಪ್ರತಿಯೋಜಿಸಲಾಗಿದೆ.

2. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಪ್ರತ್ಯಾಯೋಜಿಸಲಾಗಿದೆ

**7. ದಂಡಗಳು.–** ಈ ಅಧಿನಿಯಮ ಅಥವಾ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳ ಉಪಬಂಧಗಳನ್ನು ಉಲ್ಲಂಘಿಸಿ ಯಾವುದೇ ಸಕ್ಷಮ ಪ್ರಾಧಿಕಾರ ಅಥವಾ ಯಾವೊಬ್ಬ ಸರ್ಕಾರಿ ನೌಕರನು ನಿಯೋಜನೆ ಅಥವಾ ನೇಮಕಾತಿ ಅಥವಾ ವರ್ಗಾವಣೆಯ ಆದೇಶವನ್ನು ಮಾಡಿದ್ದರೆ, ಸಂದರ್ಭಾನುಸಾರ ಅಂಥ ಸಕ್ಷಮ ಪ್ರಾಧಿಕಾರ ಅಥವಾ ಸರ್ಕಾರಿ ನೌಕರನು ಸಿವಿಲ್ ಸೇವಕರಿಗೆ ಅನ್ವಯಿಸುವಂಥ ಶಿಸ್ತು ನಿಯಮಾವಳಿ ಅಡಿಯಲ್ಲಿ ಶಿಸ್ತಿನ ಕ್ರಮಕ್ಕೆ ಗುರಿಯಾಗತಕ್ಕದ್ದು.

[1][**7ಎ. ಅಪೀಲು**.- ಸಕ್ಷಮ ಪ್ರಾಧಿಕಾರದ ಆದೇಶಗಳಿಂದ ಬಾಧಿತನಾದ ಯಾರೇ ವ್ಯಕ್ತಿಯು ಈ ಅಧಿನಿಯಮದ ಉಪಬಂಧಗಳಡಿಯಲ್ಲಿ ಸರ್ಕಾರಕ್ಕೆ ಅಪೀಲನ್ನು ಸಲ್ಲಿಸಬಹುದು ಮತ್ತು ಸರ್ಕಾರವು ನಿಯಮಿಸಬಹುದಾದಂಥ ವಿಧಾನದಲ್ಲಿ ಅದನ್ನು ವಿಲೇವಾರಿ ಮಾಡಬಹುದು.][1]

1. 2025ರ ಅಧಿನಿಯಮ ಸಂಖ್ಯೆ:70ರ ಮೂಲಕ ದಿ:27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

**8. ಇತರ ಕಾನೂನುಗಳ ಮೇಲೆ ಅಧಿನಿಯಮದ ಅಧ್ಯಾರೋಹಿ ಪರಿಣಾಮ.–** ಈ ಅಧಿನಿಯಮದ ಉಪಬಂಧಗಳು, ತತ್ಕಾಲದಲ್ಲಿ ಜಾರಿಯಲ್ಲಿರುವ ಇತರೆ ಯಾವುದೇ ಕಾನೂನಿನಲ್ಲಿ ಅವುಗಳಿಗೆ ಅಸಂಗತವಾಗಿ ಏನೇ ಇದ್ದರೂ ಪರಿಣಾಮಕಾರಿಯಾಗಿರತಕ್ಕದ್ದು.

**9. ತೊಂದರೆಗಳನ್ನು ನಿವಾರಿಸಲು ಅಧಿಕಾರ.–** ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ಯಾವುದೇ ತೊಂದರೆ ಉದ್ಭವಿಸಿದಲ್ಲಿ, ಸರ್ಕಾರವು ಸರ್ಕಾರಿ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ಆದೇಶದ

ಮೂಲಕ, ತೊಂದರೆಗಳನ್ನು ನಿವಾರಿಸಲು ತನಗೆ ಅವಶ್ಯಕ ಅಥವಾ ಯುಕ್ತವೆಂದು ಕಂಡುಬರುವ ಮತ್ತು ಈ ಅಧಿನಿಯಮದ ಉದ್ದೇಶಗಳಿಗೆ ಅಸಂಗತವಾಗಿರದಂಥ ಉಪಬಂಧಗಳನ್ನು ರಚಿಸಬಹುದು:

ಪರಂತು, ಅಂಥ ಯಾವ ಆದೇಶವನ್ನೂ, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಮೂರು ವರ್ಷಗಳ ಅವಧಿಯು ಪೂರ್ಣಗೊಂಡ ತರುವಾಯ ಮಾಡತಕ್ಕದ್ದಲ್ಲ.

**10. ಅನುಸೂಚಿಯನ್ನು ತಿದ್ದುಪಡಿ ಮಾಡಲು ಅಧಿಕಾರ.–** ಸರ್ಕಾರವು, ಅಧಿಸೂಚನೆಯ ಮೂಲಕ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಯಾವುದೇ ನಮೂದನ್ನು ಸೇರಿಸಬಹುದು, ಮಾರ್ಪಡಿಸಬಹುದು ಅಥವಾ ತೆಗೆದುಹಾಕಬಹುದು.

**11. ಸದ್ಭಾವನೆಯಲ್ಲಿ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮದ ಅಡಿಯಲ್ಲಿ ಸದ್ಭಾವನೆಯಿಂದ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಲಾದ ಯಾವುದೇ ಕ್ರಮದ ಬಗ್ಗೆ ಸರ್ಕಾರದ ಯಾವೊಬ್ಬ ಅಧಿಕಾರಿಯ ವಿರುದ್ಧ ಯಾವುದೇ ದಾವೆ, ಅಭಿಯೋಜನೆ ಅಥವಾ ಇತರ ಕಾನೂನು ವ್ಯವಹರಣೆಯನ್ನು ಕೈಗೊಳ್ಳಲು ಅವಕಾಶವಿರತಕ್ಕದ್ದಲ್ಲ.

**12. ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ, ಅಧಿಸೂಚನೆಯ ಮೂಲಕ ಮತ್ತು ಪೂರ್ವಪ್ರಕಟಣೆ ನೀಡಿದ ತರುವಾಯ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಯಾವುದೇ ನಿಯಮವನ್ನು ಪೂರ್ವಾನ್ವಯವಾಗಿ ರಚಿಸಬಹುದು ಮತ್ತು ಅಂಥ ನಿಯಮವನ್ನು ರಚಿಸಿದ ತರುವಾಯ ನಿಯಮವನ್ನು ರಚಿಸಿದ ಕಾರಣಗಳನ್ನು ನಿರ್ದಿಷ್ಟವಾಗಿ ತಿಳಿಸುವ ಹೇಳಿಕೆಯೊಂದನ್ನು ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಮುಂದೆ ಮಂಡಿಸತಕ್ಕದ್ದು ಮತ್ತು (3)ನೇ ಉಪ ಪ್ರಕರಣದ ಅಡಿಯಲ್ಲಿ ಮಾಡಿದ ಯಾವುದೇ ಮಾರ್ಪಾಟಿಗೊಳಪಟ್ಟು, ಈ ಅಧಿನಿಯಮದ ಅಡಿಯಲ್ಲಿ ಮಾಡಿದ ಪ್ರತಿಯೊಂದು ನಿಯಮವು, ಈ ಅಧಿನಿಯಮದ ಅಡಿಯಲ್ಲಿ ಅದು ಅಧಿನಿಯಮಿತವಾಗಿದ್ದರೆ ಹೇಗೋ ಹಾಗೆ ಪರಿಣಾಮಕಾರಿಯಾಗಿರತಕ್ಕದ್ದು.

(3) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು ಅಥವಾ ಹೊರಡಿಸಿದ ಅಧಿಸೂಚನೆಯನ್ನು, ಅದನ್ನು ರಚಿಸಿದ ತರುವಾಯ ಸಾಧ್ಯವಾದಷ್ಟು ಬೇಗನೇ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಅದನ್ನು ಹಾಗೆ ಮಂಡಿಸಿದ ಅಧಿವೇಶನ ಅಥವಾ ನಿಕಟೋತ್ತರ ಅಧಿವೇಶನಗಳು ಮುಕ್ತಾಯವಾಗುವ ಮೊದಲು, ವಿಧಾನಮಂಡಲದ ಉಭಯ ಸದನಗಳು ನಿಯಮದಲ್ಲಿ ಅಥವಾ ಅಧಿಸೂಚನೆಯಲ್ಲಿ ಯಾವುದೇ ಮಾರ್ಪಾಟುಮಾಡಬೇಕೆಂದು ಒಪ್ಪಿದರೆ ಅಥವಾ ನಿಯಮವನ್ನು ಅಥವಾ ಅಧಿಸೂಚನೆಯನ್ನು ರಚಿಸಬಾರದೆಂದು ತೀರ್ಮಾನಿಸಿದರೆ, ಆ ತರುವಾಯ ಅಂಥ ನಿಯಮವು ಅಥವಾ ಅಧಿಸೂಚನೆಯು ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೀತಿಯಲ್ಲಿ ಮಾತ್ರ ಪರಿಣಾಮಕಾರಿಯಾಗಿರತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಅಂಥ ಮಾರ್ಪಾಟು ಅಥವಾ ರದ್ದತಿಯು ಆ ನಿಯಮದ ಅಥವಾ ಅಧಿಸೂಚನೆಯ ಅಡಿಯಲ್ಲಿ ಈ ಹಿಂದೆ ಮಾಡಿದ ಯಾವುದೇ ಕಾರ್ಯಕ್ಕೂ ಬಾಧಕವಾಗತಕ್ಕದ್ದಲ್ಲ.

**13. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮದ ಪ್ರಾರಂಭದ ದಿನಾಂಕದಂದು ಜಾರಿಯಲ್ಲಿರುವ ಹಾಗೂ ಯಾವ ವಿಷಯಗಳ ಮುಂದುವರಿಕೆಗಾಗಿ ಈ ಅಧಿನಿಯಮವನ್ನು ಜಾರಿಗೆ ತರಲಾಗಿದೆಯೋ ಅಥವಾ

ಉಪಬಂಧ ಕಲ್ಪಿಸಲಾಗಿದೆಯೋ ಅದಕ್ಕೆ ಸಂಬಂಧಪಟ್ಟ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 ರ (1990ರ ಕರ್ನಾಟಕ ಅಧಿನಿಯಮ 14) ಅಡಿಯಲ್ಲಿ ಈ ಅಧಿನಿಯಮದ ಪ್ರಾರಂಭಕ್ಕೆ ಮೊದಲು ರಚಿಸಿದ ಅಥವಾ ಹೊರಡಿಸಿದ ಯಾವುದೇ ನಿಯಮ, ಅಧಿಸೂಚನೆ, ಆದೇಶ ಅಥವಾ ನೇಮಕಗಳು ಅವು ಈ ಅಧಿನಿಯಮದ ಅಡಿಯಲ್ಲಿ ಮಾಡಿದ ಯಾವುದೇ ಕಾರ್ಯದಿಂದ ಅಥವಾ ತೆಗೆದುಕೊಂಡ ಯಾವುದೇ ಕ್ರಮದಿಂದ ಅಥವಾ ಯಾವುದೇ ನಿಯಮ, ಅಧಿಸೂಚನೆ, ಆದೇಶ ಅಥವಾ ನೇಮಕದಿಂದ ರದ್ದಾದ ಹೊರತು ಮತ್ತು ರದ್ದಾಗುವವರೆಗೆ, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಿರುವಷ್ಟರ ಮಟ್ಟಿಗೆ, ಅವುಗಳನ್ನು ಈ ಅಧಿನಿಯಮದ ಸಂವಾದಿ ಉಪಬಂಧಗಳ ಅಡಿಯಲ್ಲಿ ರಚಿಸಿದ್ದರೆ ಅಥವಾ ಹೊರಡಿಸಿದ್ದರೆ ಅಥವಾ ನೇಮಿಸಿದ್ದರೆ, ಹೇಗೋ ಹಾಗೆ ಜಾರಿಯಲ್ಲಿ ಮುಂದುವರಿಯತಕ್ಕದ್ದು ಮತ್ತು ಪರಿಣಾಮಕಾರಿಯಾಗಿರತಕ್ಕದ್ದು.

## ಅನುಸೂಚಿ - I

(2(ಜಿ), (ಎಲ್) ಪ್ರಕರಣ ಮತ್ತು 10ನೇ ಪ್ರಕರಣ ನೋಡಿ)

**"ವೈದ್ಯಾಧಿಕಾರಿ ಹುದ್ದೆ"ಯ ಅರ್ಥ ವ್ಯಾಪ್ತಿಯಡಿಯಲ್ಲಿ ಬರುವ ಹುದ್ದೆಗಳು**

| ಕ್ರಮ ಸಂಖ್ಯೆ | ಹುದ್ದೆಗಳ ವರ್ಗ |
|---|---|
| 1. | ಹಿರಿಯ ವಿಶೇಷಜ್ಞ /ವಿಶೇಷಜ್ಞ /ಉಪಮುಖ್ಯ ವೈದ್ಯಾಧಿಕಾರಿ/ಹಿರಿಯ ವೈದ್ಯಾಧಿಕಾರಿ. |
| 2. | ಸಾಮಾನ್ಯ ಕರ್ತವ್ಯನಿರತ ವೈದ್ಯಾಧಿಕಾರಿ/ವೈದ್ಯ – ಶ್ರೇಣಿ I (ಆಯುರ್ವೇದ/ಯುನಾನಿ/ ಹೋಮಿಯೋಪತಿ/ ಪ್ರಕೃತಿ ಚಿಕಿತ್ಸೆ/ಸಿದ್ಧ ಮತ್ತು ಯೋಗ)/ವೈದ್ಯ – ಶ್ರೇಣಿ II (ಆಯುರ್ವೇದ/ಯುನಾನಿ/ ಹೋಮಿಯೋಪತಿ/ ಪ್ರಕೃತಿ ಚಿಕಿತ್ಸೆ/ಸಿದ್ಧ ಮತ್ತು ಯೋಗ) |
| 3. | ಮುಖ್ಯ ದಂತ ಆರೋಗ್ಯ ಅಧಿಕಾರಿ/ಹಿರಿಯ ದಂತ ಆರೋಗ್ಯ ಅಧಿಕಾರಿ/ದಂತ ಆರೋಗ್ಯ ಅಧಿಕಾರಿ. |

## [1][ಅನುಸೂಚಿ - II

(2(ಹೆಚ್)(ಎಲ್) ಪ್ರಕರಣ ಮತ್ತು 10ನೇ ಪ್ರಕರಣ ನೋಡಿ)

**"ಇತರ ಸಿಬ್ಬಂದಿ"ಯ ಅರ್ಥ ವ್ಯಾಪ್ತಿಯಡಿಯಲ್ಲಿ ಬರುವ ಹುದ್ದೆಗಳು**

| ಕ್ರಮ ಸಂಖ್ಯೆ | ಹುದ್ದೆಗಳ ವರ್ಗ |
|---|---|
| 1 | ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಗ್ರೂಪ್ "ಎ" ಅಧಿಕಾರಿ. |
| 2 | ಅನುಸೂಚಿ-1ರಲ್ಲಿ ಸೇರಿರುವುದನ್ನು ಹೊರತುಪಡಿಸಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಆಯುಷ್ ವಿಭಾಗದ ಮತ್ತು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಗ್ರೂಪ್ 'ಬಿ' ಸಿಬ್ಬಂದಿ |
| 3 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಆಯುಷ್ ವಿಭಾಗದ ಮತ್ತು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಗ್ರೂಪ್ "ಸಿ" ಸಿಬ್ಬಂದಿ. |
| 4 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಆಯುಷ್ ವಿಭಾಗದ ಮತ್ತು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಗ್ರೂಪ್ "ಡಿ" ಸಿಬ್ಬಂದಿ. |

][1]

1. ಅಧಿಸೂಚನೆ ಸಂಖ್ಯೆ: HFW/18/PRS/2025 ದಿನಾಂಕ: 13.05.2025 ರ ಮೂಲಕ ಪ್ರತಿಯೋಜಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ**

**ಅಧಿಸೂಚನೆ**
**ಸಂಖ್ಯೆ:ಆಕುಕ 123 ಹೆಚ್‌ಎಸ್‌ಹೆಚ್ 2011, ಬೆಂಗಳೂರು, ದಿನಾಂಕ:12ನೇ ಮೇ, 2011.**

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011 (2011ರ ಕರ್ನಾಟಕ ಅಧಿನಿಯಮ ಸಂಖ್ಯೆ: 2) ರ ಸೆಕ್ಷನ್ (1)(2) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರೆ ಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011 (2011ರ ಕರ್ನಾಟಕ ಅಧಿನಿಯಮ ಸಂಖ್ಯೆ: 2) ವು ದಿನಾಂಕ: 12ನೇ ಮೇ, 2011 ರಿಂದ ಜಾರಿಗೆ ಬರತಕ್ಕದ್ದೆಂದು ಈ ಮೂಲಕ ಗೊತ್ತುಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಚಿಕ್ಕೇಗೌಡ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

## 2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 34

(2017ರ ಜುಲೈ ತಿಂಗಳ 11ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ತಿದ್ದುಪಡಿ) ಅಧಿನಿಯಮ, 2017

(2017ರ ಜುಲೈ ತಿಂಗಳ 6ನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011ನ್ನು (2011ರ ಕರ್ನಾಟಕ ಅಧಿನಿಯಮ 2) ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೆಂಟನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧಿನಿಯಮ, 2017 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

(ಪ್ರಕರಣ 3 ಮತ್ತು 6ನ್ನು ಮೂಲ ಅಧಿನಿಯಮದಲ್ಲಿ ಇಂಧೀಕರಿಸಲಾಗಿದೆ.)

ಸಂಖ್ಯೆ: HFW/18/PRS/2025

ಕರ್ನಾಟಕ ಸರ್ಕಾರ ಸಚಿವಾಲಯ
ಡಾ|| ಅಂಬೇಡ್ಕರ್ ವೀಧಿ, ವಿಕಾಸ ಸೌಧ,
ಬೆಂಗಳೂರು, ದಿನಾಂಕ:13.05.2025

## ಅಧಿಸೂಚನೆ

ಕರ್ನಾಟಕ ರಾಜ್ಯ ನಾಗರೀಕ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011 (2011ರ ಕರ್ನಾಟಕ ಅಧಿನಿಯಮ ಸಂಖ್ಯೆ : 2)ರ ಸೆಕ್ಷನ್ 10ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ರಾಜ್ಯ ಸರ್ಕಾರವು ಈ ಕಾಯ್ದೆಯ ಅನುಸೂಚಿ–11ನ್ನು ಈ ಮುಂದಿನಂತೆ ತಿನ್ನುವಡಿ ಮಾಡಲಾಗಿದೆ.–

ಈ ಅಧಿನಿಯಮದ ಅನುಸೂಚಿ–11ರ ನಮೂದನ್ನು ಈ ಕೆಳಗಿನಂತೆ ಸೇರಿಸತಕ್ಕದ್ದು, ಎಂದರೆ.–

**’ಅನುಸೂಚಿ–11’**

**(2(ಹೆಚ್)(ಎಲ್) ಪ್ರಕರಣ ಮತ್ತು 10ನೇ ಪ್ರಕರಣ ನೋಡಿ)**

**“ಇತರ ಸಿಬ್ಬಂದಿ"ಯ ಅರ್ಥ ವ್ಯಾಪ್ತಿಯಲ್ಲಿ ಬರುವ ಹುದ್ದೆಗಳು**

| ಕ್ರ.ಸಂ | ಹುದ್ದೆಗಳ ವರ್ಗ |
|---|---|
| 1 | ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಗ್ರೂಪ್ "ಎ" ಅಧಿಕಾರಿ. |
| 2 | ಅನುಸೂಚಿ-1ರಲ್ಲಿ ಸೇರಿರುವುದನ್ನು ಹೊರತುಪಡಿಸಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಆಯುಷ ವಿಭಾಗದ ಮತ್ತು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಗ್ರೂಪ್ 'ಬಿ' ಸಿಬ್ಬಂದಿ |
| 3 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಆಯುಷ್ ವಿಭಾಗದ ಮತ್ತು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಗ್ರೂವ್ "ಸಿ" ಸಿಬ್ಬಂದಿ. |
| 4 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಆಯುನ್ ವಿಭಾಗದ ಮತ್ತು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಗ್ರೂಪ್ "ಡಿ" ಸಿಬ್ಬಂದಿ. |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪ್ರದೀಪ್ ಕುಮಾರ್ಬಿ. ಎಸ್..)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಸೇವೆಗಳು–1)

**2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 70**

(2025 ರ ಸೆಪ್ಟೆಂಬರ್ ತಿಂಗಳ 12ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

# ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧಿನಿಯಮ, 2025

(2025 ರ ಸೆಪ್ಟೆಂಬರ್ ತಿಂಗಳ 11ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011 (2011ರ ಕರ್ನಾಟಕ ಅಧಿನಿಯಮ 2)ನ್ನು, ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು 2025ರ ಮೇ 27ನೇ ದಿನಾಂಕದಂದು ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. ಪ್ರಕರಣ 2ರ ತಿದ್ದುಪಡಿ.-** ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011 (2011ರ ಕರ್ನಾಟಕ ಅಧಿನಿಯಮ 2)ನ್ನು (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 2ನೇ ಪ್ರಕರಣದಲ್ಲಿ,-

(i) ಈಗಾಗಲೇ ಇರುವ (ಎ) ಖಂಡವನ್ನು (ಎಎ) ಎಂಬುದಾಗಿ ಮರುಸಂಖ್ಯೆ ನೀಡತಕ್ಕದ್ದು;

(ii) ಹಾಗೆ ಮರುಸಂಖ್ಯೆ ನೀಡಲಾದ (ಎಎ) ಖಂಡಕ್ಕೆ ಮೊದಲು ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಎ) "ಆಡಳಿತಾತ್ಮಕ ಹುದ್ದೆಗಳು" ಎಂದರೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ, ಜಿಲ್ಲಾ ಶಸ್ತ್ರ ಚಿಕಿತ್ಸಕ, ತರಬೇತಿ ಸಂಸ್ಥೆಗಳ ಪ್ರಾಂಶುಪಾಲ, ಜಂಟಿ ನಿರ್ದೇಶಕ, ಉಪ ನಿರ್ದೇಶಕ, ಜಿಲ್ಲಾ ಮಟ್ಟದ ಕಾರ್ಯಕ್ರಮ ಅಧಿಕಾರಿ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ದೊಡ್ಡ ಆಸ್ಪತ್ರೆಗಳ ಅಧೀಕ್ಷಕ ಹಾಗೂ ಆಯುಷ್ ಉಪ ನಿರ್ದೇಶಕ ಮತ್ತು ಜಿಲ್ಲಾ ಆಯುಷ್ ಆರೋಗ್ಯಾಧಿಕಾರಿ ಎಂಬುದಾಗಿ ಗುರುತಿಸಲಾದ ಹುದ್ದೆಗಳು;";

(iii) (ಸಿ) ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

“(ಸಿ) “ಸಕ್ಷಮ ಪ್ರಾಧಿಕಾರಿ” ಎಂದರೆ ಆರೋಗ್ಯ ಅಧಿಕಾರಿಗಳು ಅಥವಾ ಇತರ ಸಿಬ್ಬಂದಿಗಳ ವರ್ಗಾವಣೆಯ ಆದೇಶಗಳನ್ನು ಮಾಡಲು ಸಕ್ಷಮವೆಂದು ನಿಯಮಿಸಬಹುದಾದ ಅಂಥ ಪ್ರಾಧಿಕಾರಿ;

(iv) ಹಾಗೆ ಪ್ರತಿಯೋಜಿಸಲಾದ (ಸಿ) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

“(ಸಿಸಿ) “ಮಹತ್ವದ ಖಾಲಿಹುದ್ದೆ” ಎಂದರೆ ನಿಯಮಿಸಬಹುದಾದ ಅಂಥ ಹುದ್ದೆಗಳ ಖಾಲಿ ಸ್ಥಾನಗಳು”;

(v) (ಎಫ್) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

“(ಎಫ್‌ಎಫ್) “ಗ್ರೇಟರ್ ಬೆಂಗಳೂರು ಪ್ರದೇಶ” ಎಂದರೆ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ 36)ರಡಿ ರಚಿಸಲಾದ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪರಿಮಿತಿಗಳಲ್ಲಿ ಬರುವ ಪ್ರದೇಶಗಳು”;

(vi) (ಜೆ) ಖಂಡದಲ್ಲಿ “ನಿರ್ದಿಷ್ಟ ಅವಧಿಗಾಗಿ ಸೃಜಿಸಿದ” ಎಂಬ ಪದಗಳ ತರುವಾಯ “ಅಧಿಸೂಚನೆಯ ಮೂಲಕ ಸರ್ಕಾರವು ಹಾಗೆಂದು ಗುರುತಿಸಲಾದ” ಎಂಬ ಪದಗಳನ್ನು ಸೇರಿಸತಕ್ಕದ್ದು;

(vii) (ಎಂ) ಖಂಡದಲ್ಲಿ “ಹಿರಿಯ ವಿಶೇಷಜ್ಞನಾಗಿ ಕಾರ್ಯ ನಿರ್ವಹಿಸುತ್ತಿರುವ” ಎಂಬ ಪದಗಳ ಬದಲಿಗೆ “ಹಿರಿಯ ವಿಶೇಷಜ್ಞ ವೃಂದದಲ್ಲಿ ಕಾರ್ಯ ನಿರ್ವಹಿಸುತ್ತಿರುವ” ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು;

(viii) (ಎನ್) ಖಂಡದಲ್ಲಿ “ವಿಶೇಷಜ್ಞನಾಗಿ ಕಾರ್ಯ ನಿರ್ವಹಿಸುತ್ತಿರುವ” ಎಂಬ ಪದಗಳ ಬದಲಿಗೆ “ವಿಶೇಷಜ್ಞ ವೃಂದದಲ್ಲಿ ಕಾರ್ಯ ನಿರ್ವಹಿಸುತ್ತಿರುವ” ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು;

(ix) (ಎನ್) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

“(ಎನ್‌ಎನ್) “ವ್ಯಕ್ತಿಗಳ ವಿಶೇಷ ಪ್ರವರ್ಗ” ಎಂದರೆ ನಿಯಮಿಸಬಹುದಾದ ಅಂಥ ವಿಶೇಷ ಪ್ರವರ್ಗಗಳಿಗೆ ಸೇರಿದ ವ್ಯಕ್ತಿಗಳು.”; ಮತ್ತು

(x) (ಕ್ಯೂ) ಖಂಡದಲ್ಲಿ, “ಜಿಲ್ಲಾ ಕೇಂದ್ರದಲ್ಲಿರುವ” ಎಂಬ ಪದಗಳಿಗೆ ಮೊದಲು “ಗ್ರೇಟರ್ ಬೆಂಗಳೂರು ಪ್ರದೇಶವನ್ನು ಹೊರತುಪಡಿಸಿ” ಎಂಬ ಪದಗಳನ್ನು ಸೇರಿಸತಕ್ಕದ್ದು.

**3. ಪ್ರಕರಣ 3ರ ಪ್ರತಿಯೋಜನೆ.-** ಮೂಲ ಅಧಿನಿಯಮದ 3ನೇ ಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

“**3. ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಅಥವಾ ಬಡ್ತಿ.-** ಈ ಅಧಿನಿಯಮದಡಿಯಲ್ಲಿ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯ ಆರಂಭಿಕ ನೇಮಕಾತಿ, ವರ್ಗಾವಣೆ ಅಥವಾ ಮುಂಬಡ್ತಿಯನ್ನು ನಿಯಮಿಸಬಹುದಾದಂಥ ವಿಧಾನದಲ್ಲಿ ನಡೆಸುವ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಮಾಡತಕ್ಕದ್ದು:

ಪರಂತು ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ವರ್ಗಾವಣೆಗಳಿಗೆ ಸಂಬಂಧಿಸಿದ ಉಪಬಂಧಗಳು, ಪ್ರಾಜೆಕ್ಟ್ ಹುದ್ದೆಗಳು ಮತ್ತು ಆಡಳಿತಾತ್ಮಕ ಹುದ್ದೆಗಳೆಂದು ಗುರುತಿಸಲಾದ ಹುದ್ದೆಗಳಿಗೆ ಅನ್ವಯಿಸತಕ್ಕದ್ದಲ್ಲ:

ಮತ್ತು ಪರಂತು ಪ್ರಾಜೆಕ್ಟ್ ಮತ್ತು ಆಡಳಿತಾತ್ಮಕ ಹುದ್ದೆಗಳ ಆಯ್ಕೆ ಮತ್ತು ಸ್ಥಳನಿಯುಕ್ತಿಯ ಮಾನದಂಡ ಮತ್ತು ವಿಧಾನವು ನಿಯಮಿಸಬಹುದಾದಂತಿರತಕ್ಕದ್ದು."

**4. ಪ್ರಕರಣ 4ರ ತಿದ್ದುಪಡಿ.-** ಮೂಲ ಅಧಿನಿಯಮದ 4ನೇ ಪ್ರಕರಣದಲ್ಲಿ, ಪರಂತುಕವನ್ನು ಹೊರತುಪಡಿಸಿ (2)ನೇ ಉಪ-ಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(2) ಗ್ರಾಮೀಣ ಪ್ರದೇಶದಲ್ಲಿ ನಿಯಮಿಸಲಾದಷ್ಟು ವರ್ಷಗಳ ಸೇವೆಯನ್ನು ಸಲ್ಲಿಸದಿರುವ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯನ್ನು ಗ್ರಾಮೀಣ ಪ್ರದೇಶದಲ್ಲಿನ ಹುದ್ದೆಗೆ ವರ್ಗಾಯಿಸತಕ್ಕದ್ದು."

**5. ಪ್ರಕರಣ 5ರ ತಿದ್ದುಪಡಿ.-** ಮೂಲ ಅಧಿನಿಯಮದ 5ನೇ ಪ್ರಕರಣದಲ್ಲಿ, (2)ನೇ ಉಪ-ಪ್ರಕರಣ ಮತ್ತು ಅದಕ್ಕೆ ಸಂಬಂಧಿಸಿದ ನಮೂದುಗಳ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(2) ವಿಶೇಷಜ್ಞರು ಅಥವಾ ಹಿರಿಯ ವಿಶೇಷಜ್ಞರು ಹೊಂದಿರುವಂಥ ಸ್ನಾತಕೋತ್ತರ ಪದವಿ ಅಥವಾ ಸ್ನಾತಕೋತ್ತರ ಡಿಪ್ಲೋಮಾದ ತಜ್ಞತೆಗೆ, ಗುರುತಿಸದಿರುವ ಅಂಥ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಥ ವಿಶೇಷಜ್ಞರು ಅಥವಾ ಹಿರಿಯ ವಿಶೇಷಜ್ಞರನ್ನು ಅವರುಗಳು ಹೊಂದಿರುವ ವಿಶೇಷ ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಗುರುತಿಸಲಾದ ಹುದ್ದೆಗೆ ವರ್ಗಾವಣೆ ಮಾಡತಕ್ಕದ್ದು:

ಪರಂತು ವಿಶೇಷಜ್ಞರು ಮತ್ತು ಹಿರಿಯ ವಿಶೇಷಜ್ಞರನ್ನು ಪ್ರಾಜೆಕ್ಟ್ ಹುದ್ದೆಗಳು ಮತ್ತು ಆಡಳಿತಾತ್ಮಕ ಹುದ್ದೆಗಳಿಗೆ ನಿಯಮಿಸಬಹುದಾದಂಥ ವಿಧಾನದಲ್ಲಿ ಸ್ಥಳನಿಯುಕ್ತಿಗೊಳಿಸಬಹುದು."

**6. ಪ್ರಕರಣ 6ರ ಪ್ರತಿಯೋಜನೆ.-** ಮೂಲ ಅಧಿನಿಯಮದ 6ನೇ ಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

**"6. ಸಾರ್ವಜನಿಕ ಹಿತದೃಷ್ಟಿಯಿಂದ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯ ವರ್ಗಾವಣೆ.-** (1) ಸೇವೆಯಲ್ಲಿರುವ ಮತ್ತು ಗ್ರಾಮೀಣ ಪ್ರದೇಶ, ಎ, ಬಿ ವಲಯ, ಅಥವಾ ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿನ ಸರ್ಕಾರಿ ಆಸ್ಪತ್ರೆ ಅಥವಾ ಸರ್ಕಾರಿ ಸಂಸ್ಥೆಯಲ್ಲಿ, ನಿಯಮಿಸಲಾದ ಸಂಖ್ಯೆಯ ನಿರಂತರ ಸೇವೆಯ ವರ್ಷಗಳನ್ನು ಪೂರೈಸಿರುವ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯನ್ನು, ಆ ಪ್ರದೇಶ ಅಥವಾ ಹುದ್ದೆಯಲ್ಲಿ ದೀರ್ಘಾವಧಿಯ ಸೇವೆ ಅಥವಾ ಸೇವಾವಧಿಯಲ್ಲಿರುವ ವ್ಯಕ್ತಿಗಳಿಗೆ ಆದ್ಯತೆಯನ್ನು ನೀಡುವ ಮೂಲಕ ಮತ್ತು ನಿಯಮಿಸಬಹುದಾದ ಅಂಥ ಮಾನದಂಡಗಳು ಅಥವಾ ಮನ್ನಣೆಯನ್ನು (weightage) ಪರಿಗಣಿಸಿ, ಈ ಮುಂದಿನ ಕ್ರಮದಲ್ಲಿ, ಎಂದರೆ.-

(1) ಗ್ರಾಮೀಣ ಪ್ರದೇಶ;

(2) ನಗರ ಪ್ರದೇಶದಲ್ಲಿನ ವಲಯ-ಬಿ:

(3) ನಗರ ಪ್ರದೇಶದಲ್ಲಿನ ವಲಯ – ಎ; ಮತ್ತು

(4) ಗ್ರೇಟರ್ ಬೆಂಗಳೂರು ಪ್ರದೇಶ:

- ಇವುಗಳಲ್ಲಿ ಅದೇ ಪ್ರದೇಶದಲ್ಲಿನ ಮತ್ತೊಂದು ಸರ್ಕಾರಿ ಆಸ್ಪತ್ರೆ ಅಥವಾ ಸರ್ಕಾರಿ ಸಂಸ್ಥೆಗೆ ಅಥವಾ ಯಾವುದೇ ಇತರ ಪ್ರದೇಶ ಅಥವಾ ವಲಯಕ್ಕೆ ಕೌನ್ಸಿಲಿಂಗ್ ಪ್ರಕ್ರಿಯೆಯ ಮೂಲಕ ವರ್ಗಾಯಿಸಬಹುದು:

ಪರಂತು, ವರ್ಷಾವಧಿಯಲ್ಲಿ ಅಂಥ ವರ್ಗಾವಣೆಯ ಒಟ್ಟು ಸಂಖ್ಯೆಯು ಅದೇ ವೃಂದದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಖ್ಯಾಬಲದ "ಶೇಕಡಾ ಹದಿನೈದರಷ್ಟನ್ನು" ಮೀರತಕ್ಕದ್ದಲ್ಲ:

ಮತ್ತು ಪರಂತು ವಿಶೇಷ ಪ್ರವರ್ಗಗಳಿಗೆ ಸೇರಿದ ವ್ಯಕ್ತಿಗಳ ಸಂದರ್ಭದಲ್ಲಿ, ಸರ್ಕಾರವು ವರ್ಗಾವಣೆಗಾಗಿ ಪ್ರತ್ಯೇಕ ಷರತ್ತುಗಳು ಮತ್ತು ವಿನಾಯಿತಿಗಳನ್ನು ನಿಯಮಿಸಬಹುದು:

ಅಲ್ಲದೆ ಪರಂತು ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿ ಸೇವೆ ಸಲ್ಲಿಸುತ್ತಿರುವ ವ್ಯಕ್ತಿಗಳಿಗಾಗಿ, ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿನ ವಿವಿಧ ಹುದ್ದೆಗಳಲ್ಲಿ ವ್ಯಕ್ತಿಯು ಸಲ್ಲಿಸಿದ ಒಟ್ಟು ನಿರಂತರ ಸೇವೆಯನ್ನು, ಪ್ರಸ್ತುತ ಹುದ್ದೆಯಲ್ಲಿ ವ್ಯಕ್ತಿಯು ಸಲ್ಲಿಸಿದ ಒಟ್ಟು ನಿರಂತರ ಸೇವೆಗಿಂತ ಮಿಗಿಲಾಗಿ ಸೇವಾಕಾಲದ ಅವಧಿಯನ್ನು ಅಳೆಯುವ ಉದ್ದೇಶಕ್ಕಾಗಿ ಲೆಕ್ಕಹಾಕತಕ್ಕದ್ದು:

ಅಲ್ಲದೆ ಪರಂತು (1)ನೇ ಉಪ-ಪ್ರಕರಣದ ಅಡಿಯಲ್ಲಿ ಗ್ರೇಟರ್ ಬೆಂಗಳೂರು ಪ್ರದೇಶದಿಂದ ಹೊರಗಡೆಗೆ ವರ್ಗಾಯಿಸಲು ಅರ್ಹರಿರುವ ವ್ಯಕ್ತಿಗಳಿಗೆ ಕೌನ್ಸಿಲಿಂಗ್ ನಡೆಯುವಾಗ, ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿನ ಖಾಲಿ ಹುದ್ದೆಗಳು ಲಭ್ಯವಾಗತಕ್ಕದ್ದಲ್ಲ.

(2) ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯನ್ನು ಅಮಾನತ್ತಿನಿಂದ ಪೂರ್ವಪದವಿಗೆ ತರುವುದರ (reinstatement) ಮೇರೆಗೆ ಅಥವಾ ಶಿಸ್ತು ವಿಚಾರಣೆ ಬಾಕಿಯಿರಿಸಿದ ಅಮಾನತ್ತಿನ ಜಾಗಕ್ಕೆ ಪ್ರತಿಯಾಗಿ ಪ್ರಸ್ತುತ ಹುದ್ದೆಯಿಂದ ಬದಲಾಯಿಸುವ ಮೇರೆಗೆ ಸಕ್ಷಮ ಪ್ರಾಧಿಕಾರವು ಕೌನ್ಸಿಲಿಂಗ್ ಮೂಲಕ ವರ್ಷಾವಧಿಯ ಯಾವುದೇ ಸಮಯದಲ್ಲಿ ಸ್ಥಳನಿಯುಕ್ತಿಗೊಳಿಸತಕ್ಕದ್ದು, ಆದರೆ ಆತನನ್ನು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ವಲಯಕ್ಕಿಂತ ಮೇಲಿನ ವಲಯಕ್ಕೆ ಸ್ಥಳನಿಯುಕ್ತಿಗೊಳಿಸತಕ್ಕದ್ದಲ್ಲ ಹಾಗೂ ಶಿಸ್ತು ಪ್ರಾಧಿಕಾರದ ಆದೇಶಗಳಲ್ಲಿ ನಿರ್ದಿಷ್ಟಪಡಿಸಿದ ಪ್ರದೇಶದೊಳಗೆ ಸ್ಥಳನಿಯುಕ್ತಿಯನ್ನು ನಿರ್ಬಂಧಿಸಬಹುದು.

(3) ಮಹತ್ವದ ಖಾಲಿಹುದ್ದೆಗಳನ್ನು ತುಂಬಲು ಸರ್ಕಾರವು ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯನ್ನು ವರ್ಷಾವಧಿಯ ಯಾವುದೇ ಸಮಯದಲ್ಲಿ ಕೌನ್ಸಿಲಿಂಗ್ ಇಲ್ಲದೆ ಸ್ಥಳನಿಯುಕ್ತಿಗೊಳಿಸಬಹುದು:

ಪರಂತು ಸ್ಥಳನಿಯುಕ್ತಿಗೊಳಿಸಬೇಕಾದ ವೈದ್ಯಾಧಿಕಾರಿ ಅಥವಾ ಇತರ ಸಿಬ್ಬಂದಿಯು ನಿರ್ದಿಷ್ಟಪಡಿಸಿದ ವಿಶೇಷ ಪ್ರವರ್ಗಗಳ ವಿನಾಯಿತಿಗೊಳಪಟ್ಟು (1)ನೇ ಉಪ-ಪ್ರಕರಣದ

ಅನುಸಾರ ಸಿದ್ಧಪಡಿಸಿದ ದೀರ್ಘಾವಧಿ ಸೇವಾ ವ್ಯಕ್ತಿಗಳ ಪಟ್ಟಿಯಲ್ಲಿ ಅತ್ಯಂತ ಜೇಷ್ಠರಾಗಿರತಕ್ಕದ್ದು."

**7. ಹೊಸ ಪ್ರಕರಣ 7ಎ ಸೇರ್ಪಡೆ.-** ಮೂಲ ಅಧಿನಿಯಮದ 7ನೇ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"**7ಎ. ಅಪೀಲು.-** ಸಕ್ಷಮ ಪ್ರಾಧಿಕಾರದ ಆದೇಶಗಳಿಂದ ಬಾಧಿತನಾದ ಯಾರೇ ವ್ಯಕ್ತಿಯು ಈ ಅಧಿನಿಯಮದ ಉಪಬಂಧಗಳಡಿಯಲ್ಲಿ ಸರ್ಕಾರಕ್ಕೆ ಅಪೀಲನ್ನು ಸಲ್ಲಿಸಬಹುದು ಮತ್ತು ಸರ್ಕಾರವು ನಿಯಮಿಸಬಹುದಾದಂಥ ವಿಧಾನದಲ್ಲಿ ಅದನ್ನು ವಿಲೇವಾರಿ ಮಾಡಬಹುದು."

**8. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧ್ಯಾದೇಶ, 2025 (2025ರ ಕರ್ನಾಟಕ ಅಧ್ಯಾದೇಶ ಸಂ.05)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ತಿದ್ದುಪಡಿಯಾದಂತೆ ಮೂಲ ಅಧಿನಿಯಮದಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.